# All India Radio: Bangalore
# National Bulletin In Kannada
# 27.04.2026  07.35 a.m.

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**27.04.2026  07.35 a.m.**

**<><><><>**

ಮುಖ್ಯಾಂಶಗಳು

1. ಪಶ್ಚಿಮ ಬಂಗಾಳ ವಿಧಾನಸಭೆಯ ಅಂತಿಮ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ತೆರೆ
2. ಬೇಸಿಗೆಯ ವಾಸ್ತವ್ಯಕ್ಕಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಐದು ದಿನ ಹಿಮಾಚಲ ಪ್ರದೇಶಕ್ಕೆ ಭೇಟಿ
3. ಪ್ರಧಾನಿ ನರೇಂದ್ರ ಮೋದಿ, ಸಿಕ್ಕಿಂಗೆ ಇಂದಿನಿಂದ ಎರಡು ದಿನ ಭೇಟಿ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
4. ಐಪಿಎಲ್ ಟಿ-೨೦ ಕ್ರಿಕೆಟ್; ಸೂಪರ್ ಓವರ್‌ನಲ್ಲಿ ಲಖನೌ ಸೂಪರ್ ಜೈಂಟ್ಸ್ ಮಣಿಸಿದ ಕೋಲ್ಕತ್ತಾ ನೈಟ್ ರೈಡರ್ಸ್

<><><><>

ಪಶ್ಚಿಮ ಬಂಗಾಳ ವಿಧಾನಸಭೆಯ ಎರಡನೇ ಮತ್ತು ಅಂತಿಮ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ತೆರೆಬೀಳಲಿದೆ. ವಿವಿಧ ಪಕ್ಷಗಳ ರಾಜಕೀಯ ನಾಯಕರು ಮತದಾರರನ್ನು ಸೆಳೆಯಲು ಇಂದು ಅಂತಿಮ ಕಸರತ್ತಿನಲ್ಲಿ ತೊಡಗಲಿದ್ದಾರೆ. ಬುಧವಾರದಂದು ಎರಡನೇ ಹಂತದ ಮತದಾನ ನಡೆಯಲಿದೆ. ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ ನಿನ್ನೆ ಉತ್ತರ ೨೪ ಪರಗಣ ಜಿಲ್ಲೆಯ ಬಂಗಾವ್‌ನಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು. ಬಿಜೆಪಿ ನಾಯಕ ಅಮಿತ್ ಶಾ ಕೂಡ ತೆಹಟ್ಟಾ, ನಾಡಿಯಾ ಮತ್ತು ಅನುಲಿಯಾದಲ್ಲಿ ನಡೆದ ರ‍್ಯಾಲಿಗಳಲ್ಲಿ ಪಕ್ಷದ ಅಭ್ಯರ್ಥಿ ಪರ ಮತಯಾಚಿಸಿದರು.  ತೃಣಮೂಲ ಕಾಂಗ್ರೆಸ್ ಅಧ್ಯಕ್ಷೆ ಮತ್ತು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ತಮ್ಮ ಸ್ವಂತ ಕ್ಷೇತ್ರವಾದ ಭವಾನಿಪುರದಲ್ಲಿ ಪ್ರಚಾರ ನಡೆಸಿದರು. ಟಿಎಂಸಿ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ, ಮಗ್ರಹತ್ ಪಶ್ಚಿಮದಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿದರು. ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ

ಮತದಾನ ಕಳೆದ ೨೩ ರಂದು ನಡೆಯಿತು. ಕೇರಳ, ತಮಿಳುನಾಡು, ಅಸ್ಸಾಂ ರಾಜ್ಯಗಳಲ್ಲಿ ನಡೆದ ವಿಧಾನಸಭಾ ಚುನಾವಣೆಗಳು ಮತ್ತು ಕೇಂದ್ರಾಡಳಿತ ಪ್ರದೇಶ ಪುದುಚೇರಿ ಹಾಗೂ ಪಶ್ಚಿಮ ಬಂಗಾಳದಲ್ಲಿ ಎರಡು ಹಂತಗಳ ಚುನಾವಣೆಯ ಮತ ಎಣಿಕೆ ಮೇ ೪ ರಂದು ನಡೆಯಲಿದೆ.

<><><><>

ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ಎರಡನೇ ಹಂತದ ವಿಧಾನಸಭಾ ಚುನಾವಣೆಗೆ ಚುನಾವಣಾ ಆಯೋಗವು ಕಠಿಣ ಭದ್ರತಾ ಯೋಜನೆಯನ್ನು ಘೋಷಿಸಿದ್ದು, ಮತದಾನಕ್ಕೆ ಅಡ್ಡಿಪಡಿಸುವ ಅಥವಾ ಮತದಾರರಿಗೆ ಅಡ್ಡಿಪಡಿಸುವ ಯಾವುದೇ ಪ್ರಯತ್ನವನ್ನು ಕಠಿಣವಾಗಿ ಎದುರಿಸಲಾಗುವುದು ಎಂದು ಸ್ಪಷ್ಟಪಡಿಸಿದೆ. ಮತದಾರರು ತಮ್ಮ ಮತದಾನವನ್ನು ಭಯವಿಲ್ಲದೆ ಚಲಾಯಿಸುವಂತೆ ಖಚಿತಪಡಿಸಿಕೊಳ್ಳಲು ಸೂಕ್ಷ್ಮ ಪ್ರದೇಶಗಳಲ್ಲಿ ಕ್ಷೇತ್ರವಾರು ನಿಯೋಜನೆ ಮತ್ತು ಭದ್ರತೆ ಹೆಚ್ಚಿಸುವಂತೆ ಚುನಾವಣಾ ಆಯೋಗ ಭದ್ರತಾ ಸಿಬ್ಬಂದಿಗೆ ನಿರ್ದೇಶನ ನೀಡಿದೆ. ಏತನ್ಮಧ್ಯೆ, ಎರಡನೇ ಹಂತದ ಮತದಾನಕ್ಕೆ ಮುಂಚಿತವಾಗಿ ದಕ್ಷಿಣ ೨೪ ಪರಗಣ ಜಿಲ್ಲೆಯ ಕಾಕ್‌ದ್ವೀಪ್‌ಗೆ ಭೇಟಿ ನೀಡಿದ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿ ಮನೋಜ್ ಕುಮಾರ್ ಅಗರ್ವಾಲ್ ಅವರು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ, ಮತದಾರರು ಮುಕ್ತವಾಗಿ ಭಾಗವಹಿಸುವ ನಿಟ್ಟಿನಲ್ಲಿ ಪ್ರೋತ್ಸಾಹಿಸುವಂತೆ ಒತ್ತಾಯಿಸಿದರು.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಬೇಸಿಗೆಯ ವಾಸ್ತವ್ಯಕ್ಕಾಗಿ ಇಂದಿನಿಂದ ಐದು ದಿನ ಹಿಮಾಚಲ ಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಅವರು ಶಿಮ್ಲಾದ ಮಶೋಬ್ರಾದಲ್ಲಿರುವ ರಾಷ್ಟ್ರಪತಿ ನಿವಾಸದಲ್ಲಿ ತಂಗಲಿದ್ದಾರೆ. ನಾಳೆ ಶಿಮ್ಲಾದ ಲೋಕಭವನದಲ್ಲಿ ಹಿಮಾಚಲ ಪ್ರದೇಶದ ರಾಜ್ಯಪಾಲರು ಆಯೋಜಿಸಿರುವ ಔತಣಕೂಟದಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಷ್ಟ್ರಪತಿಗಳು ಬುಧವಾರ ಅಟಲ್ ಸುರಂಗಕ್ಕೆ ಭೇಟಿ ನೀಡಲಿದ್ದಾರೆ. ಮರುದಿನ ಅವರು ಪಾಲಂಪುರದಲ್ಲಿರುವ ಚೌಧರಿ ಸರ್ವಣ್ ಕುಮಾರ್ ಹಿಮಾಚಲ ಪ್ರದೇಶ ಕೃಷಿ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿಯೂ ಭಾಗಿಯಾಗಲಿದ್ದಾರೆ. ಅದೇ ದಿನ, ರಾಷ್ಟ್ರಪತಿಗಳು ಮಶೋಬ್ರಾದಲ್ಲಿರುವ ರಾಷ್ಟ್ರಪತಿ ನಿವಾಸದಲ್ಲಿ ಔತಣಕೂಟ ಆಯೋಜಿಸಿದ್ದಾರೆ. ತಮ್ಮ ಪ್ರವಾಸದ ಕೊನೆಯ ದಿನವಾದ ಮೇ ೧ ರಂದು ಶಿಮ್ಲಾದಲ್ಲಿರುವ ಸೇನಾ ತರಬೇತಿ ಕಮಾಂಡ್‌ಗೆ ಭೇಟಿ ನೀಡಲಿದ್ದಾರೆ.

<><><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದಿನಿಂದ ಎರಡು ದಿನ ಆಂಧ್ರಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಇಂದು ವಿಶಾಖಪಟ್ಟಣಂನಲ್ಲಿರುವ ಆಂಧ್ರ ವಿಶ್ವವಿದ್ಯಾಲಯದ ಶತಮಾನೋತ್ಸವ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನ ಸಿಕ್ಕಿಂಗೆ ಭೇಟಿ ನೀಡಲಿದ್ದಾರೆ. ಸಿಕ್ಕಿಂನ ಪರಿಸರ ಮತ್ತು ಪುಷ್ಪ ಪರಂಪರೆಯನ್ನು ಪ್ರದರ್ಶಿಸುತ್ತಾ ವಿಶ್ವದರ್ಜೆಯ ಆರ್ಕಿಡ್ ಅನುಭವ ನೀಡುವ ಗ್ಯಾಂಗ್ಟಾಕ್‌ನಲ್ಲಿರುವ ಆರ್ಕಿಡೇರಿಯಂಗೆ ಅವರು ಇಂದು ಭೇಟಿ ನೀಡಲಿದ್ದಾರೆ. ಸಿಕ್ಕಿಂನ ೫೦ನೇ ರಾಜ್ಯ ಸಂಸ್ಥಾಪನಾ ದಿನಾಚರಣೆಯ ಸಮಾರೋಪ ಸಮಾರಂಭದಲ್ಲಿ ಭಾಗಿಯಾಗಿ ರಾಜ್ಯಾದ್ಯಂತದ ನಾಲ್ಕು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಮೂಲಸೌಕರ್ಯ, ಸಂಪರ್ಕ, ಆರೋಗ್ಯ ರಕ್ಷಣೆ, ಶಿಕ್ಷಣ, ವಿದ್ಯುತ್, ನಗರಾಭಿವೃದ್ಧಿ, ಪರಿಸರ, ಪ್ರವಾಸೋದ್ಯಮ, ಕೃಷಿ ಸೇರಿದಂತೆ ವಿವಿಧ ಕ್ಷೇತ್ರಗಳ ಯೋಜನೆಗಳು, ಸಮಗ್ರ ಅಭಿವೃದ್ಧಿಯನ್ನು ವೇಗಗೊಳಿಸುವ ಗುರಿ ಹೊಂದಿವೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆಯಿಂದ ಎರಡು ದಿನ ಉತ್ತರ ಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ನಾಳೆ ಅವರು, ವಾರಾಣಸಿಯಲ್ಲಿ ಮಹಿಳಾ ಸಮ್ಮೇಳನದಲ್ಲಿ ಭಾಗಿಯಾಗಲಿದ್ದಾರೆ. ಅಲ್ಲಿ ಅವರು ಆರು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಬನಾರಸ್-ಪುಣೆ ಮತ್ತು ಅಯೋಧ್ಯೆ-ಮುಂಬೈ ನಡುವಿನ ಎರಡು ಹೊಸ ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ. ಬುಧವಾರದಂದು ಅವರು, ಕಾಶಿ ವಿಶ್ವನಾಥ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಲಿದ್ದಾರೆ. ಬಳಿಕ ಹಾರ್ದೋಯ್‌ನಲ್ಲಿ ಗಂಗಾ ಎಕ್ಸ್‌ಪ್ರೆಸ್‌ವೇಯನ್ನು ಲೋಕಾರ್ಪಣೆ ಮಾಡಲಿದ್ದಾರೆ. ೫೯೪ ಕಿಲೋಮೀಟರ್ ಉದ್ದದ, ೬ ಪಥದ ಹಸಿರು ಹೈ-ಸ್ಪೀಡ್ ಕಾರಿಡಾರ್ ಅನ್ನು ಸುಮಾರು ಮೂವತ್ತಾರು ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಶಹಜಹಾನ್‌ಪುರ ಜಿಲ್ಲೆಯಲ್ಲಿ ಮೂರುವರೆ ಕಿಲೋಮೀಟರ್ ಉದ್ದದ ತುರ್ತು ಲ್ಯಾಂಡಿಂಗ್ ಸೌಲಭ್ಯ ಒದಗಿಸಿರುವುದು ಈ ಯೋಜನೆಯ ಪ್ರಮುಖ ಅಂಶವಾಗಿದೆ.

<><><>

ಭಾರತ ಮತ್ತು ನ್ಯೂಜಿಲೆಂಡ್ ಇಂದು ನವದೆಹಲಿಯಲ್ಲಿ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಲಿವೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ. ಇದು ಎರಡೂ ದೇಶಗಳ ನಡುವಿನ ಆರ್ಥಿಕ ಸಂಬಂಧಗಳನ್ನು ಬಲಪಡಿಸುವ ಮಹತ್ವದ ಹೆಜ್ಜೆಯಾಗಿದೆ. ನ್ಯೂಜಿಲೆಂಡ್‌ನ ವ್ಯಾಪಾರ ಮತ್ತು ಹೂಡಿಕೆ ಸಚಿವ ಟಾಡ್ ಮೆಕ್‌ಕ್ಲೇ ಅವರೊಂದಿಗೆ ಆಗ್ರಾದ ತಾಜ್ ಮಹಲ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಮಾತನಾಡಿದ ಪಿಯೂಷ್ ಗೋಯಲ್, ವರ್ಷಗಳ ಉನ್ನತ ಮಟ್ಟದ ಚರ್ಚೆಗಳ ನಂತರ ಒಪ್ಪಂದವನ್ನು ಅಂತಿಮಗೊಳಿಸಲಾಗಿದೆ ಎಂದು ಹೇಳಿದರು. ಮುಂದಿನ ಐದು ವರ್ಷಗಳಲ್ಲಿ ದ್ವಿಪಕ್ಷೀಯ ವ್ಯಾಪಾರವನ್ನು ಐದು ಬಿಲಿಯನ್ ಡಾಲರ್‌ಗಳಿಗೆ ದ್ವಿಗುಣಗೊಳಿಸುವ ಗುರಿಯನ್ನು ಮುಕ್ತ ವ್ಯಾಪಾರ ಒಪ್ಪಂದ ಹೊಂದಿದೆ. ಈ ಒಪ್ಪಂದವು ಭಾರತೀಯ ಸರಕುಗಳಿಗೆ ಮಾರುಕಟ್ಟೆ ಪ್ರವೇಶವನ್ನು ಗಮನಾರ್ಹವಾಗಿ ಸುಧಾರಿಸುತ್ತದೆ ಮತ್ತು ವ್ಯಾಪಾರ ಅವಕಾಶಗಳನ್ನು ಹೆಚ್ಚಿಸುತ್ತದೆ ಎಂದು ಸಚಿವ ಪಿಯೂಷ್ ಗೋಯಲ್ ತಿಳಿಸಿದರು.

<><><>

ಇರಾನ್ ವಾಯುಪ್ರದೇಶವು ಸರಕು ಮತ್ತು ಚಾರ್ಟರ್ಡ್ ವಿಮಾನಗಳಿಗೆ ಭಾಗಶಃ ಮುಕ್ತವಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭಾರತೀಯ ಪ್ರಜೆಗಳು, ಇರಾನ್‌ಗೆ ಪ್ರಯಾಣಿಸುವುದನ್ನು ತಪ್ಪಿಸಲು ಸೂಚಿಸಲಾಗಿದೆ ಮತ್ತು ಈಗಾಗಲೇ ಇರಾನ್‌ನಲ್ಲಿರುವವರು ರಾಯಭಾರ ಕಚೇರಿಯ ಬೆಂಬಲದೊಂದಿಗೆ ಭೂ ಗಡಿಯ ಮೂಲಕ ಸ್ವದೇಶಕ್ಕೆ ತೆರಳುವಂತೆ ಕೋರಲಾಗಿದೆ. ಎರಡು ಸಾವಿರದ ನಾಲ್ಕುನೂರ ನಲವತ್ತೈದು ಭಾರತೀಯ ಪ್ರಜೆಗಳು, ಭೂ ಗಡಿ ಮಾರ್ಗಗಳ ಮೂಲಕ ಇರಾನ್‌ನಿಂದ ಹೊರಗೆ ತೆರಳಲು ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು, ಅನುಕೂಲ ಮಾಡಿಕೊಟ್ಟಿದೆ. ಫೆಬ್ರವರಿ ೨೮ ರಿಂದ ಸುಮಾರು ೧೨ ಲಕ್ಷ ೯೭ ಸಾವಿರ ಪ್ರಯಾಣಿಕರು ಇರಾನ್‌ನಿಂದ ಭಾರತಕ್ಕೆ ಪ್ರಯಾಣಿಸಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

<><><>

ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರು ಸಂಯುಕ್ತ ಅರಬ್ ಒಕ್ಕೂಟ-ಯುಎಇ ಅಧ್ಯಕ್ಷ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರನ್ನು ಅಬುಧಾಬಿಯಲ್ಲಿ ನಿನ್ನೆ

ಭೇಟಿಯಾಗಿ, ಮಾತುಕತೆ ನಡೆಸಿದರು. ಎರಡೂ ದೇಶಗಳ ನಡುವೆ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಇನ್ನಷ್ಟು ಆಳಗೊಳಿಸುವ ಕ್ರಮಗಳು, ಪ್ರಾದೇಶಿಕ ಪರಿಸ್ಥಿತಿ ಮತ್ತು ಪರಸ್ಪರ ಹಿತಾಸಕ್ತಿಗಳ ಇತರ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು ಎಂದು ಯುಎಇಯಲ್ಲಿರುವ ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

<><><><>

ಐಪಿಎಲ್ ಟಿ-೨೦ ಕ್ರಿಕೆಟ್‌ನಲ್ಲಿ, ಉತ್ತರ ಪ್ರದೇಶದ ಲಕ್ನೋದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಸೂಪರ್ ಓವರ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ, ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ಮಣಿಸಿತು. ಕೋಲ್ಕತ್ತಾ ನೈಟ್ ರೈಡರ್ಸ್ ನೀಡಿದ್ದ ೧೫೬ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಲಕ್ನೋ ಸೂಪರ್ ಜೈಂಟ್ಸ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್‌ಗಳಿಗೆ ೧೫೫ ರನ್ ಗಳಿಸಿತು. ನಂತರದ ಸೂಪರ್ ಓವರ್‌ನಲ್ಲಿ, ಲಕ್ನೋ ಸೂಪರ್ ಜೈಂಟ್ಸ್ ಎರಡೂ ವಿಕೆಟ್‌ಗಳನ್ನು ಕಳೆದುಕೊಂಡು ಕೇವಲ ೧ ರನ್ ಗಳಿಸುವಲ್ಲಿ ಯಶಸ್ವಿಯಾಯಿತು. ೫೧ ಎಸೆತಗಳಲ್ಲಿ ೮೩ ರನ್ ಗಳಿಸಿದ ರಿಂಕು ಸಿಂಗ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>